ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೯

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ
## (ಮುಂದುವರೆದ ಉಪವೇಶನ)

**ಬುಧವಾರ, ದಿನಾಂಕ: ೨೨ನೇ ಮಾರ್ಚ್, ೨೦೧೭**

---

**ಸಮೂಹ – III**

೧. ಅರಣ್ಯ ಸಚಿವರು.

೨. ಕಂದಾಯ ಸಚಿವರು.

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೪. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ಜವಳಿ ಹಾಗೂ ಮುಜರಾಯಿ ರಾಜ್ಯ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು.

---

## ಬರಗಾಲದಲ್ಲಿ ಜಾನುವಾರುಗಳ ಸಂರಕ್ಷಣೆ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)–**

೧೨೧ (೧೧೨೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತ್ಯಂತ ಭೀಕರದ ಬರಗಾಲವಿದ್ದು, ಜಾನುವಾರುಗಳ ಸಂರಕ್ಷಣೆ ಸಲುವಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಎಷ್ಟು ಗೋಶಾಲೆಗಳನ್ನು ಪ್ರಾರಂಭಿಸಲಾಗಿದೆ ?

## ಮೂಡಿಗೆರೆ ತಾಲ್ಲೂಕಿನ ಅಕ್ರಮ – ಸಕ್ರಮ ಸಮಿತಿಯ ಸಭೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೨ (೧೩೬೭) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನಲ್ಲಿ ಕಳೆದ ೬ ತಿಂಗಳಿಂದ ಅಕ್ರಮ–ಸಕ್ರಮ ಸಮಿತಿಯಲ್ಲಿ ಎಷ್ಟು ಸಭೆಗಳು ನಡೆದಿರುತ್ತವೆ ; ಸದರಿ ಅವಧಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಸಾಗುವಳಿ ಪತ್ರ ವಿತರಿಸಲಾಗಿರುತ್ತದೆ ಮತ್ತು ಎಷ್ಟು ಸಾಗುವಳಿ ಪತ್ರಗಳು ಬಾಕಿ ಇರುತ್ತವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೬ ತಿಂಗಳಿಂದ ಎಷ್ಟು ಜನ ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗದ ಫಲಾನುಭವಿಗಳಿಗೆ ಸಾಗುವಳಿ ಪತ್ರವನ್ನು ವಿತರಣೆ ಮಾಡಲಾಗಿರುತ್ತದೆ ; ಮತ್ತು ಬಾಕಿ ಉಳಿದಿರುವ ಪ್ರಕರಣಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನ ಮೂಡಿಗೆರೆ ತಾಲ್ಲೂಕು ಕಂದಾಯ ಇಲಾಖೆಯಲ್ಲಿ ನಮೂನೆ ೫೦–೫೩ರಲ್ಲಿ ಮಂಜೂರಾತಿ ಕೋರಿ ಬಂದಿರುವ ಬಗರ್‌ಹುಕುಂ ಸಾಗುವಳಿ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ಎಷ್ಟು ಪ್ರಕರಣಗಳು ಬಾಕಿ ಉಳಿದಿರುತ್ತವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಮೂಡಿಗೆರೆ ತಾಲ್ಲೂಕು, ಬಣಕಲ್ ಹೆಸಗೋಡು ಗ್ರಾಮದ ಸರ್ವೆ ನಂ. ೨೦೩ರಲ್ಲಿ ಸಾಗುವಳಿ ಮಾಡಿದ್ದ ಜಮೀನು ಮತ್ತು ಗುಡಿಸಲು ಮನೆಯನ್ನು ದ್ವಂಸ ಮಾಡಿ ತೆರವುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಫಲಾನುಭವಿಯು ೯ಳಸಿ ಅಡಿಯಲ್ಲಿ ಅರ್ಜಿ ಸಲ್ಲಿಸಿ, ಮಂಜೂರಾತಿಗಾಗಿ ಕಾಯುತ್ತಿರುವ ಸಂದರ್ಭದಲ್ಲಿ ತೆರವುಗೊಳಿಸಿರುವ ಕ್ರಮ ಸರಿಯೇ ?

## ಬರ ಮತ್ತು ಅತಿವೃಷ್ಟಿಗೆ ಕೇಂದ್ರ ಸರ್ಕಾರದ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೩ (೧೧೩೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ತೀವ್ರತರವಾದ ಬರ ಉಂಟಾದಾಗ ಕೇಂದ್ರ ಸರ್ಕಾರ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೦೮ ರಿಂದ ೨೦೧೭ ರವರೆಗೆ ಕೇಂದ್ರ ಸರ್ಕಾರ ಬರ ನಿರ್ವಹಣೆಗೆ ಮತ್ತು ಅತಿವೃಷ್ಟಿ ನಿರ್ವಹಣೆಗೆ ನೀಡಿದ ಹಣದ ಮೊತ್ತ ಎಷ್ಟು ; ರಾಜ್ಯ ಸರ್ಕಾರ ಮನವಿ ಮಾಡಿದ ಮೊತ್ತ ಎಷ್ಟು ; ಕೇಂದ್ರ ಸರ್ಕಾರ ಮಂಜೂರು ಮಾಡಿದ ಮೊತ್ತ ಎಷ್ಟು ; ಖರ್ಚು ಮಾಡಿದ ಮೊತ್ತ ಎಷ್ಟು ? (ವರ್ಷಾವಾರು ವಿವರ ನೀಡುವುದು)

## ಸರ್ಕಾರಿ ಜಾಗಗಳಲ್ಲಿ ಕಟ್ಟಿರುವ ಮನೆಗಳಿಗೆ ಹಕ್ಕು ಪತ್ರ ನೀಡುವ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೪ (೧೨೨೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸರ್ಕಾರಿ ಜಾಗಗಳಲ್ಲಿ ಕಟ್ಟಿರುವ ಮನೆಗಳಿಗೆ ಹಕ್ಕು ಪತ್ರ ನೀಡುವ ಕಾರ್ಯಕ್ರಮ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಇದುವರೆವಿಗೂ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸ್ವೀಕೃತವಾಗಿರುವ ಅರ್ಜಿಗಳ ಪೈಕಿ ಎಷ್ಟು ಅರ್ಜಿಗಳನ್ನು ಇತ್ಯರ್ಥ ಗೊಳಿಸಲಾಗಿದೆ ; ಉಳಿದ ಅರ್ಜಿಗಳನ್ನು ಇತ್ಯರ್ಥಗೊಳಿಸಲು ನಿಗದಿಪಡಿಸಿರುವ ಕಾಲಮಿತಿ ಏನು ? (ವಿವರ ನೀಡುವುದು)

## ಅರಣ್ಯಗಳಲ್ಲಿ ಬೆಂಕಿ ಕಾಣಿಸಿಕೊಂಡಿರುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

**ಮತ್ತು ಇತರರು**

೧೨೫ (೧೧೩೨+೧೧೦೨+೧೧೩೧+೧೧೫೧+೧೦೮೩) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ಅರಣ್ಯಗಳಲ್ಲಿ (ಕಪ್ಪತಗುಡ್ಡ, ಬಂಡೀಪುರ, ನಾಗರಹೊಳೆ, ಮಹದೇಶ್ವರ ಮತ್ತು ಬಿ.ಆರ್.ಟಿ. ವನ್ಯಧಾಮಗಳು ಸೇರಿದಂತೆ) ಕಾಡ್ಗಿಚ್ಚು ಕಾಣಿಸಿಕೊಂಡ ಪ್ರಕರಣಗಳೆಷ್ಟು ; ಕಾಡ್ಗಿಚ್ಚಿನಿಂದ ಆಗಿರತಕ್ಕ ಒಟ್ಟು ಅರಣ್ಯ ನಾಶ ಎಷ್ಟು ; ಈ ಅಗ್ನಿ ಅವಘಡದಲ್ಲಿ ಸಂಬಿವಿಸಿರುವ ಮಾನವ ಪ್ರಾಣಹಾನಿ ಮತ್ತು ವನ್ಯ ಜೀವಿ ಪ್ರಾಣಹಾನಿ ಪ್ರಕರಣಗಳ ಸಂಖ್ಯೆ ಎಷ್ಟು ; ಇದರಿಂದ ಉಂಟಾಗಿರುವ ಅರಣ್ಯ ನಾಶದ ಅಂದಾಜು ಎಷ್ಟು ; (ವರ್ಷಾವಾರು, ಅರಣ್ಯವಾರು ವಿವರ ಒದಗಿಸುವುದು)

(ಆ) ಪ್ರತಿ ಬಾರಿ ಕಾಡ್ಗಿಚ್ಚು ನಂದಿಸುವ ಕಾರ್ಯಾಚರಣೆಗೆ ಹಿಡಿದ ದಿನಗಳೆಷ್ಟು, ಅದಕ್ಕೆ ತಗಲಿರುವ ವೆಚ್ಚ ಎಷ್ಟು ;

(ಇ) ಕಾಡಿನಲ್ಲಿ ಕಿಡಿಗೇಡಿಗಳಿಂದ ಬೆಂಕಿ ಬಿದ್ದ ಪ್ರಕರಣಗಳೆಷ್ಟು ; ತಪ್ಪಿತಸ್ಥರ ವಿರುದ್ಧ ಕೈಗೊಂಡ ಕಾನೂನು ಕ್ರಮಗಳಾವುವು ;

(ಈ) ಬೆಂಕಿ ನಂದಿಸಲು ಅರಣ್ಯ ಸಿಬ್ಬಂದಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ ; ಹೆಲಿಕಾಪ್ಟರ್ ಇತ್ಯಾದಿ ವ್ಯವಸ್ಥೆಗಳನ್ನು ಕೇಂದ್ರ ಸರ್ಕಾರದಿಂದ ಪಡೆಯಲು ಸರ್ಕಾರ ಪ್ರಯತ್ನಿಸುವುದೆ ; ಈ ಕೆಲಸಕ್ಕಾಗಿ ನೇಮಕವಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಉ) ಕಾಡ್ಗಿಚ್ಚು ನಿಯಂತ್ರಿಸುವುದಕ್ಕೆ ಸಿಬ್ಬಂದಿ, ಕೊರತೆ ಇರುವುದು ನಿಜವೆ ; ರಾಷ್ಟ್ರೀಯ ಉದ್ಯಾನವನಗಳಲ್ಲಿ, ಅರಣ್ಯ ವಿಭಾಗಗಳಲ್ಲಿ ಇರುವ ವಲಯಗಳ ಸಂಖ್ಯೆ ಮಂಜೂರಾಗಿರುವ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿ, ಹಾಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು) ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಊ) ಅರಣ್ಯ ಸಂರಕ್ಷಣೆ ಮಾಡಲು ಅರಣ್ಯ ಪ್ರದೇಶಕ್ಕೆ ಫೈರ್‌ಲೈನ್ ಮತ್ತು ಡೇ ಲೈನ್ ಅಳವಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಋ) ಈ ಕಾಡ್ಗಿಚ್ಚಿನಿಂದ ವಸತಿ ಕಳೆದುಕೊಂಡಿರುವ ಅರಣ್ಯ ವಾಸಿಗಳಿಗೆ ಪುನರ್ ವಸತಿ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು; (ವಿವರ ನೀಡುವುದು)

(ಎ) ರಾಜ್ಯದ ಅರಣ್ಯಗಳಿಗೆ ಬೆಂಕಿ ಬೀಳುತ್ತಿರುವುದರಿಂದ ವನ್ಯ ಜೀವಿಗಳು ಗ್ರಾಮೀಣ ಪ್ರದೇಶಗಳತ್ತ ವಲಸೆ ಬಂದು ರೈತರ ಸಂಪತ್ತು ನಾಶ ಮಾಡುತ್ತಿರುವುದರಿಂದ ರೈತರು ಅನುಭವಿಸುತ್ತಿರುವ ತೊಂದರೆಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಏ) ಬಂಡೀಪುರ ಅಭಯಾರಣ್ಯದ ವ್ಯಾಪ್ತಿಯಲ್ಲಿ ಇತ್ತೀಚೆಗೆ ಕಾಣಿಸಿಕೊಂಡ ಕಾಡ್ಗಿಚ್ಚು ನಂದಿಸುವ ವೇಳೆ ಡಿಆರ್‌ಎಫ್‌ಓ ಒಬ್ಬರು ಸಜೀವ ದಹನಗೊಂಡಿರುವುದು ನಿಜವೇ ; ಮೃತರ ಕುಟುಂಬ ವರ್ಗದವರಿಗೆ ಸರ್ಕಾರ ನೀಡಿರುವ ಪರಿಹಾರಗಳೇನು ?

## ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೨೬ (೧೧೬೪) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಲ್ಲಿ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣ ಎಷ್ಟು ; ಉಳಿಕೆಯಾದ ಮೊತ್ತ ಎಷ್ಟು ? (ಕಾಮಗಾರಿವಾರು ಮಾಹಿತಿ ನೀಡುವುದು)

## ಗೋಮಾಳ ಜಮೀನಿನ ರಕ್ಷಣೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೭ (೧೧೬೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಗೋಮಾಳ ಜಮೀನಿನ ವಿಸ್ತೀರ್ಣವೆಷ್ಟು ;

(ಆ) ಇದರಲ್ಲಿ, ಬೇರೆ ಬೇರೆ ಉದ್ದೇಶಗಳಿಗೆ ಒತ್ತುವರಿಯಾಗಿರುವ ಪ್ರದೇಶಗಳೆಷ್ಟು;

(ಇ) ಗೋಮಾಳ ಜಮೀನಿನ ರಕ್ಷಣೆಗೆ ಹಾಗೂ ಒತ್ತುವರಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಂಡೀಪುರ ಮತ್ತು ನಾಗರಹೊಳೆ ಅರಣ್ಯದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೧೨೮ (೧೦೮೬) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಂಡೀಪುರ ಮತ್ತು ನಾಗರಹೊಳೆ ಅರಣ್ಯ ಸಂರಕ್ಷಣೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇದರಲ್ಲಿ ಭರ್ತಿಯಾಗಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಎಷ್ಟು ದಿನಗಳಿಂದ ಖಾಲಿ ಇವೆ ; (ವಿವರ ನೀಡುವುದು)

(ಇ) ಅಗತ್ಯ ಸಿಬ್ಬಂದಿಗಳ ಕೊರತೆ ಇರುವುದರಿಂದ, ಕಾಡಿನ ರಕ್ಷಣೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅರಣ್ಯ ಸಂರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವಾಗ ಭರ್ತಿ ಮಾಡಲಾಗುವುದು ?

## ಮಂಡ್ಯ ಜಿಲ್ಲೆಯ, ಕೆರೆಗೋಡು ಹೋಬಳಿ ಚಿಕ್ಕಬಳ್ಳಿ ಪಿಕಪ್ ನಾಲಾ ಅಭಿವೃದ್ಧಿ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೯ (೧೧೯೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆ, ಕೆರೆಗೋಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ ೧೫೦ ಮೀ. ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯ ಕೈಗೊಳ್ಳಲಾಗಿದೆಯೇ ; ಸಮೀಕ್ಷಾ ಕಾರ್ಯವನ್ನು ಯಾವಾಗ ಕೈಗೊಳ್ಳಲಾಯಿತು;

(ಆ) ಹಾಗಿದ್ದಲ್ಲಿ, ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಾಸಾಧ್ಯತೆಯ ವರದಿಯ ಪ್ರಮುಖ ಅಂಶಗಳೇನು ; (ವರದಿಯ ಪ್ರತಿ ಒದಗಿಸುವುದು)

(ಇ) ಸದರಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಯಾವಾಗ ; ಪೂರ್ಣಗೊಳಿಸಲಾಗುವುದು ಯಾವಾಗ ; ಕಾಮಗಾರಿಯನ್ನು ಪೂರ್ಣಗೊಳಿಸಲು ಗೊತ್ತುಪಡಿಸಿರುವ ಕಾಲಮಿತಿ ಎಷ್ಟು ;

(ಈ) ದುಸ್ಥಿತಿಯಲ್ಲಿರುವ ತೂಬುಗಳನ್ನು ದುರಸ್ಥಿಗೊಳಿಸಿ, ಖಾಯಂ ತೂಬುಗಳನ್ನು ಅಳವಡಿಸಲು ಅಂದಾಜು ಪಟ್ಟಿ ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಖಾಯಂ ತೂಬುಗಳನ್ನು ಯಾವಾಗ, ಎಲ್ಲೆಲ್ಲಿ ಅಳವಡಿಸಲಾಗುವುದು ? (ವಿವರ ನೀಡುವುದು)

## ಪೋಡಿ ಪ್ರಕ್ರಿಯೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೦ (೧೨೨೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಭೂಮಾಪಕರ ಕೊರತೆಯಿಂದಾಗಿ ಪೋಡಿ ಮಾಡುವ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈಗಿರುವ ಭೂಮಾಪಕರು ಸಹ ಸಮಯಕ್ಕೆ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ರೀತಿಯ ಕಾನೂನು ಕ್ರಮ ಕೈಗೊಳ್ಳಲಾಗಿದೆ ?

## ಬರಪರಿಹಾರ ಕಾಮಗಾರಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೧೩೧ (೧೧೩೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಬರ ಪರಿಹಾರ ನಿರ್ವಹಣೆಗೆ ಒಟ್ಟು ಎಷ್ಟು ಹಣ ಬಿಡುಗಡೆ ಮಾಡಿರುತ್ತದೆ ಮತ್ತು ಇಲ್ಲಿಯವರೆಗೆ ಎಷ್ಟು ಹಣ ಖರ್ಚಾಗಿರುತ್ತದೆ ;

(ಆ) ರಾಜ್ಯ ಸರ್ಕಾರವು ಜಿಲ್ಲಾವಾರು ಎಷ್ಟು ಗೋಶಾಲೆಗಳನ್ನು ತೆರೆದಿರುತ್ತದೆ ; ಸದರಿ ಗೋಶಾಲೆಗಳಲ್ಲಿ ನೀರು ಪೂರೈಕೆಗೆ, ರೈತರ ತಂಗುದಾಣಕ್ಕೆ ಹಾಗೂ ಪರಿಸರ ನೈರ್ಮಲ್ಯ ನಿರ್ವಹಣೆಗೆ ಏನು ಕ್ರಮಗಳನ್ನು ಕೈಗೊಂಡಿರುತ್ತದೆ ;

(ಇ) ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಬರ ಪರಿಹಾರ ನಿರ್ವಹಣೆಯ ವೆಚ್ಚದಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ;

(ಈ) ತುಮಕೂರು ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಜನವರಿ, ಫೆಬ್ರವರಿ ಮತ್ತು ಮಾರ್ಚ್ ತಿಂಗಳಿನಲ್ಲಿ (೨೦೧೭) ಬರ ಪರಿಹಾರ ನಿರ್ವಹಣೆಗೆ ಜಿಲ್ಲಾಧಿಕಾರಿಗಳ ಮೂಲಕ ಎಷ್ಟು ಹಣ ಬಿಡುಗಡೆಯಾಗಿರುತ್ತದೆ ; ಮತ್ತು ಈ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾ ಸಮಿತಿಗಳನ್ನು ರಚಿಸಲಾಗಿದೆಯೇ ; ರಚಿಸಲಾಗಿದ್ದಲ್ಲಿ, ಸದರಿ ಸಮಿತಿಗಳು ಎಷ್ಟು ಸಭೆಗಳನ್ನು ನಡೆಸಿರುತ್ತವೆ ?

## ರಾಜ್ಯದಲ್ಲಿ ಅಂತರ್‌ಜಲ ಮಟ್ಟ ಹೆಚ್ಚಿಸಲು ಜಲಮರುಪೂರಣ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೩೨ (೧೧೩೩) ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಂತರ್ ಜಲ ಮಟ್ಟ ಅತ್ಯಂತ ಅಪಾಯದ ಮಟ್ಟಕ್ಕೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಅಂತರ್‌ಜಲ ಮಟ್ಟ ತೀರಾ ಕುಸಿದಿದೆ ;

(ಇ) ಈ ತಾಲ್ಲೂಕುಗಳಲ್ಲಿ ಹೊಸದಾಗಿ ಕೊಳವೆ ಬಾವಿಗಳನ್ನು ಕೊರೆಯಲು ನಿರ್ಬಂಧ ವಿಧಿಸಲಾಗಿದೆಯೇ ;

(ಈ) ರಾಜ್ಯದಲ್ಲಿ ಕುಸಿಯುತ್ತಿರುವ ಅಂತರ್‌ಜಲ ಮಟ್ಟವನ್ನು ಕಾಪಾಡಿಕೊಳ್ಳಲು ಜಲಮರುಪೂರಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ;

(ಉ) ಹಾಗಿದ್ದಲ್ಲಿ, ಜಲಮರುಪೂರಣ ಯೋಜನೆಗಳ ಅನುಷ್ಠಾನಕ್ಕೆ ಬೇರೆ ಬೇರೆ ಇಲಾಖೆಗಳಿಂದ ಅನುಷ್ಠಾನಗೊಳಿಸಿದ ಯೋಜನೆಗಳು ಯಾವುವು ; ಅನುಷ್ಠಾನಗೊಳಿಸಿದ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಊ) ಜಲಮರುಪೂರಣ ಯೋಜನೆಗಳ ಅನುಷ್ಠಾನಕ್ಕೆ ೨೦೦೪ ರಿಂದ ಮಾಡಿದ ವೆಚ್ಚವೆಷ್ಟು ? (ವರ್ಷಾವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅರಣ್ಯ ಇಲಾಖೆಯಿಂದ ರಾಜ್ಯ ಹೆದ್ದಾರಿ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗಿಡ ನೆಟ್ಟಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೩ (೧೧೨೧) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆ ವತಿಯಿಂದ ರಾಜ್ಯ ಹೆದ್ದಾರಿ, ರಾಷ್ಟ್ರೀಯ ಹೆದ್ದಾರಿಗಳ ಅಕ್ಕ–ಪಕ್ಕ ಉತ್ತಮ ಜಾತಿಯ ಮರಗಳನ್ನು ನೆಡಲಾಗಿದೆಯೇ ; (ವಿವರ ನೀಡುವುದು)

(ಆ) ರಾಜ್ಯದ ಅರಣ್ಯ ವ್ಯಾಪ್ತಿಯಲ್ಲಿ ಶ್ರೀಗಂಧ ಬೆಳೆಯಲು ಕ್ರಮ ಕೈಗೊಳ್ಳಲಾಗಿದೆಯೇ; ಶ್ರೀಗಂಧ ಬೆಳೆದಿರುವ ಪ್ರದೇಶ ಹಾಗೂ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗಿದೆ ; (ವಿವರ ನೀಡುವುದು)

(ಇ) ೨೦೧೨ ರಿಂದ ೨೦೧೭ನೇ ಸಾಲಿನವರೆಗೆ ಅರಣ್ಯ ಇಲಾಖಾ ವತಿಯಿಂದ ವಿವಿಧ ಬಗೆಯ ಮರಮುಟ್ಟುಗಳನ್ನು ಹರಾಜು ಮಾಡಿರುವ ಬಗ್ಗೆ ವಿವರ ನೀಡುವುದು ಮತ್ತು ಸರ್ಕಾರದ ಬೊಕ್ಕಸಕ್ಕೆ ಬಂದಿರುವ ಆದಾಯದ ವಿವರ ನೀಡುವುದು ;

(ಈ) ೨೦೧೨ ರಿಂದ ೨೦೧೭ ರವರೆಗೆ ಅರಣ್ಯ ಇಲಾಖೆಯ ಮರಮುಟ್ಟುಗಳನ್ನು ಕಳ್ಳಸಾಗಾಣಿಕೆ ಮಾಡಿ ವಶಪಡಿಸಿಕೊಳ್ಳಲಾದ ವಾಹನದ ವಿವರಗಳನ್ನು ಒದಗಿಸುವುದು ?

## ಅರಣ್ಯ ಪ್ರದೇಶಗಳಲ್ಲಿ ಅಕೇಷಿಯಾ ಹಾಗೂ ನೀಲಗಿರಿ ಮರಗಳನ್ನು ನೆಡುವುದನ್ನು ನಿಷೇಧಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೩೪ (೧೧೪೬) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಪ್ರಮುಖ ಅರಣ್ಯ ಪ್ರದೇಶಗಳು ಯಾವುವು ;

(ಆ) ನೀಲಗಿರಿ ಮತ್ತು ಅಕೇಷಿಯಾ ಮರಗಳನ್ನು ಯಾವ ಯಾವ ಅರಣ್ಯ ಪ್ರದೇಶಗಳಲ್ಲಿ ನೆಡುವುದನ್ನು ನಿಷೇಧಿಸಲಾಗಿದೆ ; ನಿಷೇಧಿಸಲು ಕಾರಣವೇನು; ಯಾವಾಗಿನಿಂದ ನಿಷೇಧಿಸಲಾಗಿದೆ ?

## ಕುದುರೆಮುಖ ಐರನ್ ಕಂಪನಿ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೫ (೧೦೯೯) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನ ಕುದುರೆಮುಖ ಐರನ್ ಕಂಪನಿಯು ಅರಣ್ಯ ಪ್ರದೇಶದಲ್ಲಿ ಸ್ಥಾಪಿತವಾಗಿದ್ದು, ರೈತರ ಜಮೀನನ್ನು ವಶಪಡಿಸಿಕೊಂಡು, ರೈತರಿಗೆ ಉದ್ಯೋಗ ಅವಕಾಶ ಕಲ್ಪಿಸುವ ಭರವಸೆ ನೀಡಿದ್ದರ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ರೈತರಿಂದ ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ; ಸದರಿ ರೈತ ಕುಟುಂಬದವರಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣವೇನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ಸ್ಪಷ್ಟನೆ ನೀಡುವುದು)

(ಇ) ಕುದುರೆಮುಖ ಐರನ್ ಕಂಪನಿಯು ಅರಣ್ಯದಲ್ಲಿದ್ದು, ಟೌನ್ ಶಿಪ್ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಬರುವುದರಿಂದ, ಕಂಪನಿಯು ವಶಪಡಿಸಿಕೊಂಡಿರುವ ಜಮೀನು ಯಾವ ಇಲಾಖೆಯ ವಶದಲ್ಲಿ ಬರುತ್ತದೆ ; (ಸ್ಪಷ್ಟನೆ ನೀಡುವುದು)

(ಈ) ಕಂಪನಿಯು ವಶಪಡಿಸಿಕೊಂಡಿರುವ ಜಮೀನನ್ನು ಡಿನೋಟಿಫಿಕೇಷನ್ ಮಾಡಲು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ; ಇದ್ದಲ್ಲಿ, ಇದಕ್ಕೆ ಪರಿಹಾರವಾಗಿ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಕುದುರೆಮುಖ ಟೌನ್ ಶಿಪ್ ಪ್ರದೇಶದಲ್ಲಿ ವಾಸಿಸುತ್ತಿರುವವರ ಮೇಲೆ ಅರಣ್ಯ ಇಲಾಖೆಯವರು ಕಿರುಕುಳ ನೀಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಊ) ಹಾಲಿ ಇರುವ ಕಂಪನಿಯ ಕಟ್ಟಡಗಳನ್ನು ಸರ್ಕಾರದ ಉಪಯೋಗಕ್ಕೆ ಬಳಸಿಕೊಳ್ಳಲಾಗುತ್ತಿದೆಯೇ ; ಇಲ್ಲವಾದಲ್ಲಿ, ಕಾರಣಗಳೇನು ; ಮುಂದಿನ

ದಿನಗಳಲ್ಲಿ ಈ ಕಟ್ಟಡಗಳನ್ನು ಬಳಸಿಕೊಳ್ಳುವ ವಿಚಾರ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕೆಲಸಕಾರ್ಯಗಳಿಗೆ ಬಳಸಲು ಚಿಂತನೆ ನಡೆಸಲಾಗಿದೆ ; (ವಿವರ ನೀಡುವುದು)

(ಖ) ಕಂಪನಿಯ ಗಣಿಗಾರಿಕೆ ಅರಣ್ಯ ಇಲಾಖೆವ್ಯಾಪ್ತಿಯಲ್ಲಿ ಬರುತ್ತಿದ್ದು, ಕಂಪನಿಯ ಟೌನ್‌ಶಿಪ್ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಬರುತ್ತದೆ. ಈ ಕುರಿತು ಯಾವ ಇಲಾಖೆಯವರಿಗೆ ಈ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆ ಮಾಡಲಾಗುತ್ತದೆ ; ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವ ಯಾವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 1134, ಪ್ರತಿಗಳು 1500